**ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಸಮ್ಮುಖದಲ್ಲಿ**

**ಕಡತ ಸಂಖ್ಯೆ: ಗ್ರಾಅಪ 176 ಜಿಪಿಎಸ್ 2022**
**ದಿನಾಂಕ:26.04.2022.**

ಮುಖ್ಯ ಕಾರ್ಯನಿರ್ವಾಹಣಾಧಿಕಾರಿ, ವಾದಿ
ರಾಮನಗರ ಜಿಲ್ಲಾ ಪಂಚಾಯತ್, ರಾಮನಗರ ಜಿಲ್ಲೆ.

ವಿರುದ್ಧ

ಕುಮಾರಿ ಶೋಭಾ ಎಂ,
ಪಂಚಾಯಿತಿ ಅಭಿವೃದ್ಧಿ ಅಧಿಕಾರಿ,
ಜೆ.ಬ್ಯಾಡರಹಳ್ಳಿ ಗ್ರಾಮ ಪಂಚಾಯಿತಿ, ಪ್ರತಿವಾದಿಗಳು
ಚನ್ನಪಟ್ಟಣ ತಾಲ್ಲೂಕು,
ರಾಮನಗರ ಜಿಲ್ಲೆ.

**ಪ್ರಸ್ತಾವನೆ:**

ಕುಮಾರಿ ಶೋಭಾ ಎಂ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಜೆ.ಬ್ಯಾಡರಹಳ್ಳಿ ಗ್ರಾಮ ಪಂಚಾಯಿತಿ, ಹಾಲಿ ಬಿ.ವಿ ಹಳ್ಳಿ ಗ್ರಾಮ ಪಂಚಾಯಿತಿ, ಚನ್ನಪಟ್ಟಣ ತಾಲ್ಲೂಕು, ರಾಮನಗರ ಜಿಲ್ಲೆ ಇವರು ರಾಮನಗರ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಶಿಸ್ತು ಪ್ರಾಧಿಕಾರಿಗಳು ವಿಧಿಸಿರುವ ದಂಡನಾದೇಶದ ವಿರುದ್ದ ಸರ್ಕಾರಕ್ಕೆ ಮೇಲ್ಮನವಿಯನ್ನು ಸಲ್ಲಿಸಿದ್ದು, ಸದರಿ ಮೇಲ್ಮನವಿಯಲ್ಲಿ ಶಿಸ್ತು ಪ್ರಾಧಿಕಾರಿಗಳು ವಿಧಿಸಿರುವ ಕರ್ನಾಟಕ ನಾಗರೀಕ ಸೇವಾ (ವ.ನಿ&ಮೇ) ನಿಯಮಗಳು 1957ರ ನಿಯಮ 8(iii) ರನ್ವಯ ಒಂದು ವಾರ್ಷಿಕ ವೇತನ ಬಡ್ತಿಯನ್ನು ಸಂಚಿತ ರಹಿತವಾಗಿ ತಡೆಹಿಡಿದು ಆದೇಶಿಸಿರುವ ಹಾಗೂ ಅಮಾನತ್ತಿನ ಅವಧಿಯನ್ನು ಅಮಾನತ್ತು ಎಂದು ಪರಿಗಣಿಸಿ ಆದೇಶಿಸಿರುವುದನ್ನು ಪ್ರಶ್ನಿಸಿ, ಸರ್ಕಾರಕ್ಕೆ ಮೇಲ್ಮನವಿಯನ್ನು ಸಲ್ಲಿಸಿರುತ್ತಾರೆ.

**ಮೇಲ್ಮನವಿದಾರರ (ನೌಕರರ) ಮೇಲಿನ ಆರೋಪಗಳು**

- ಕುಮಾರಿ ಶೋಭಾ ಎಂ. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಜೆ. ಬ್ಯಾಡರಹಳ್ಳಿ ಗ್ರಾಮ ಪಂಚಾಯಿತಿ, ಚನ್ನಪಟ್ಟಣ ತಾಲ್ಲೂಕು ಇವರು ಜೆ. ಬ್ಯಾಡರಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಕರ್ನಾಟಕ ಪಂಚಾಯತ್ ರಾಜ್ ಗ್ರಾಮ ಪಂಚಾಯಿತಿಗಳ ಲೆಕ್ಕ ಪತ್ರಗಳು ಮತ್ತು ಆಯಾ ವ್ಯಯ ನಿಯಮಗಳು 2006 ರ ನಿಯಮ 24 ರ ರೀತ್ಯಾ ಗ್ರಾಮ ಪಂಚಾಯಿತಿ ಆದಾಯ ವಸೂಲಿಗೆ ನಮೂನೆ-7 ರಲ್ಲಿ ದಿನವಹಿ, ವಸಲಿ ಪುಸ್ತಕ ನಿರ್ವಹಿಸಬೇಕಾಗಿದ್ದು, ಸದರಿ ವಹಿಗಳನ್ನು ನಿರ್ವಹಿಸಿದ್ದರೂ ವ್ಯವಹಾರಗಳನ್ನು ದಾಖಲಿಸದೇ ಇರುವುದು ಹಾಗೂ ರಸೀದಿಗಳಲ್ಲಿ ವಸೂಲಾದ ಮನೆ ಕಂದಾಯ ಮತ್ತು ಇತರ ಸ್ವೀಕೃತಿಗಳ ಮೊಬಲಗನ್ನು ರಸೀದಿ ಪುಸ್ತಕದಲ್ಲಿ ಸಂಗ್ರಹಿಸಿದ ಹಣ 2017-18 ನೇ ಸಾಲಿನ ದಿನಾಂಕ : 01-04-2017 ರಿಂದ ದಿನಾಂಕ 11-07-2017 ರವರೆಗೆ ತೆರಿಗೆ ಮತ್ತು ಫೀಜುಗಳ ಬಾಬ್ತು ವಸಲಾದ ಒಟ್ಟು ಹಣ ರೂ 1,74,511/- ಗಳಾಗಿದ್ದು, 15.07.2017ರ ವರೆಗೆ ಬ್ಯಾಂಕ್ ಖಾತೆಗೆ ಮಾಡಿದ ಮೊಬಲಗು ರೂ.1,26,249/- ಗಳಾಗಿದ್ದು, ವರ್ಷದ ಪ್ರಾರಂಭದಿಂದಲೂ 48,252/- ಗಳನ್ನು ಬ್ಯಾಂಕ್ ಖಾತಾಗೆ ಜಮಾ ಮಾಡದೇ ತಮ್ಮ ಬಳಿಯಲ್ಲಿಯೇ ಉಳಿಸಿಕೊಂಡು ಸರ್ಕಾರಿ ಹಣವನ್ನು ದುರುಪಯೋಗ ಪಡಿಸಿಕೊಂಡಿರುವ ಆರೋಪ.

- ನೌಕರರು ಜೆ, ಬ್ಯಾಡರಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ದಿನಾಂಕ 01-04-2017 ರಿಂದ ವರ್ಗ-1 ಹಾಗೂ 14ನೇ ಹಣಕಾಸು ಯೋಜನೆಯ ಅನುದಾನದ ನಗದು ಪುಸ್ತಕವನ್ನು ನಿರ್ವಹಿಸಿದ್ದು, ದಿನಾಂಕ: 01.04,2017 ರಿಂದ ಇಲ್ಲಿಯವರೆಗೆ ಕರ್ನಾಟಕ ಪಂಚಾಯತ್ ರಾಜ್ ಗ್ರಾಮ ಪಂಚಾಯಿತಿಗಳ ಲೆಕ್ಕ ಪತ್ರಗಳು ಮತ್ತು ಆಯಾ ವ್ಯಯ ನಿಯಮಗಳು 2006 ನಿಯಮ 103 ರ ರೀತ್ಯಾ ನಗದು, ಪುಸ್ತಕವನ್ನು ನಿರ್ವಹಿಸದೇ ದಿನವಹಿ ನಗದು, ಪುಸ್ತಕಗಳನ್ನು ಬರೆದಿರುವ ಆರೋಪ.

- ನೌಕರರು ಜೆ, ಬ್ಯಾಡರಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಸರ್ಕಾರದ ವತಿಯಿಂದ ಗ್ರಾಮ ಪಂಚಾಯಿತಿ ನೌಕರರಿಗೆ ವೇತನ ಪಾವತಿಸಲು ಎಸ್ಕ್ರೋ ಖಾತೆಗೆ ಬಿಡುಗಡೆಯಾದ ಹಣವನ್ನು ಬೇರೆ ಬಾಬ್ತಿಗೆ ವೆಚ್ಚ ಮಾಡುವುದನ್ನು ನಿಷೇಧಿಸಲಾಗಿದ್ದರೂ ದಿ:03.02.2017 ರಂದು ರೂ. 10,893/- ಗಳನ್ನು ಟಿಲಿಫೋನ್ ಬಿಲ್ ಪಾವತಿಸದೆ ದಿನಾಂಕ:13.02.2017 ರಂದು ರೂ.22,830/- ಕಂಪ್ಯೂಟರ್ ರಿಪೇರಿ ಬಿಲ್ ಮತ್ತು ರೂ 6,510/- ಗಳು ಅಕ್ಟೋಬರ್ ಮತ್ತು ನವೆಂಬರ್ 2016ರ ಮಾಹೆಯ ಬಾವುಟ ಹಾರಿಸಿದ ಖರ್ಚು ಸೇರಿ ಒಟ್ಟು ರೂ. 40,233/- ಗಳನ್ನು ನಿಯಮಬಾಹಿರವಾಗಿ ಪಾವತಿಸಿದ್ದು. ಗ್ರಾಮ ಪಂಚಾಯಿತಿಯ ನಿಧಿಯಹಣವನ್ನು ದುರುಪಯೋಗಪಡಿಸಿಕೊಂಡಿರುವ ಆರೋಪ.

- ನೌಕರರು ಜೆ.ಬ್ಯಾಡರಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ 2016-17 ನೇ ಸಾಲಿನಲ್ಲಿ ಅಧ್ಯಕ್ಷರ ಕೊಠಡಿಯ ಒಳಾಂಗಣ ವಿನ್ಯಾಸ ಅಭಿವೃದ್ಧಿ ಕಾಮಗಾರಿಗೆ ರೂ 1.00 ಲಕ್ಷ, ಉಪಾಧ್ಯಕ್ಷರ ಕೊಠಡಿಯ ಒಳಾಂಗಣ ವಿನ್ಯಾಸ, ಅಭಿವೃದ್ಧಿ ಕಾಮಗಾರಿಗೆ ರೂ. 1.00 ಲಕ್ಷ. ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯವರು ಕೊಠಡಿಯ ಒಳಾಂಗಣ ವಿನ್ಯಾಸ ಕಾಮಗಾರಿಗೆ ರೂ. 1.00 ಲಕ್ಷ ಕಾರ್ಯದರ್ಶಿಯವರ ಕೊಠಡಿಯ ಒಳಾಂಗಣ ವಿನ್ಯಾಸ ಕಾಮಗಾರಿಗೆ ರೂ. 1.00 ಲಕ್ಷ ಮತ್ತು ಗಣಕಯಂತ್ರ ಕೊಠಡಿಗೆ ರೂ.1.00 ಲಕ್ಷ ಒಟ್ಟು 5.00 ಲಕ್ಷಗಳ ಕಾಮಗಾರಿಗಳು ಮಾಡಿಸಲಾಗಿದ್ದು, ಕರ್ನಾಟಕ ಸಂಗ್ರಹಣೆಗಳ ಪಾರದರ್ಶಕತೆ ಅಧಿನಿಯಮ 2000 ರ ನಿಯಮಗಳ ಕಲಂ 4(ಇ)(ii)ರ ರೀತ್ಯಾ ರೂ.1.00 ಲಕ್ಷಗಳಿಗೆ ಮೀರಿದ ಕಾಮಗಾರಿಗಳನ್ನು ಟೆಂಡರ್ ಪ್ರಕ್ರಿಯೆ ಮುಖೇನ ಕಾರ್ಯಗತಗೊಳಿಸುವ ಬದಲು ತುಂಡುಗುತ್ತಿಗೆ ಮೇಲೆ ಗುತ್ತಿಗೆದಾರರಿಗೆ ಕಾಮಗಾರಿಗಳನ್ನು ನೀಡಿ, ಗ್ರಾಮ ಪಂಚಾಯಿತಿಗೆ ಆರ್ಥಿಕ ನಷ್ಟವನ್ನು ಉಂಟು ಮಾಡಿರುವ ಆರೋಪ.

ನೌಕರರು ಸಲ್ಲಿಸಿರುವ ಮೇಲ್ಮನವಿ ಕುರಿತಂತೆ ಪರಿಶೀಲಿಸಲು ಮೇಲ್ಮನವಿಯಲ್ಲಿನ ಅಂಶಗಳ ಬಗ್ಗೆ ಕಂಡಿಕೆವಾರು ಷರಾಗಳನ್ನು ಸೂಕ್ತ ಅಭಿಪ್ರಾಯದೊಂದಿಗೆ ಸರ್ಕಾರಕ್ಕೆ ಸಲ್ಲಿಸುವಂತೆ ಜಿಲ್ಲಾ ಪಂಚಾಯತ್, ರಾಮನಗರ ರವರನ್ನು ಕೋರಲಾಗಿದರನ್ವಯ ಸದರಿಯವರು ಸಲ್ಲಿಸಿರುವ ಕಂಡಿಕೆವಾರು/ಷರಾಗಳನ್ನು ಹಾಗೂ ನೌಕರರ ಮೇಲಿನ ಆಪಾದನೆಗೆ ಸಂಬಂಧಿಸಿದಂತೆ ವಿಚಾರಣಾಧಿಕಾರಿಗಳು ವಿಚಾರಣೆ ನಡೆಸಿ ಸಲ್ಲಿಸಿರುವ ವಿಚಾರಣಾ ವರದಿ ಮತ್ತು ನೌಕರರು ತಮ್ಮ ಮೇಲ್ಮನವಿಗೆ ಸಂಬಂಧಿಸಿದಂತೆ ಸರ್ಕಾರಕ್ಕೆ ಸಲ್ಲಿಸಿರುವ ಲಿಖಿತ ಹೇಳಿಕೆ ಹಾಗೂ ಅದರೊಂದಿಗಿನ ಸಂಬಂಧಿಸಿದ ದಾಖಲೆಗಳನ್ನು ಅವಲೋಕಿಸಿದಾಗ ಸದರಿಯವರು ಕರ್ತವ್ಯದಲ್ಲಿ ನಿರ್ಲಕ್ಷ್ಯತೆ, ಬೇಜವಾಬ್ದಾರಿ, ಅಧಿಕಾರ ದುರುಪಯೋಗ ಮತ್ತು ಸರ್ಕಾರದ ಆದೇಶ/ನಿಯಮಗಳನ್ನು ಭಾಗಶಃ ಉಲ್ಲಂಘಿಸಿರುವುದು ಮೇಲ್ನೋಟಕ್ಕೆ ಕಂಡು ಬರುತ್ತದೆ.

ಈ ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಮೇಲ್ಮನವಿದಾರರ ಮೇಲಿನ ಆರೋಪಗಳಿಗೆ ಸಂಬಂಧಿಸಿದಂತೆ ರಾಮನಗರ ಜಿಲ್ಲಾ ಪಂಚಾಯಿತಿ ರವರು ಕುಮಾರಿ ಶೋಭಾ ಎಂ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಜೆ.ಬ್ಯಾಡರಹಳ್ಳಿ ಗ್ರಾಮ ಪಂಚಾಯಿತಿ, ಹಾಲಿ ಬಿ.ವಿ ಹಳ್ಳಿ ಗ್ರಾಮ ಪಂಚಾಯಿತಿ, ಚನ್ನಪಟ್ಟಣ ತಾಲ್ಲೂಕು, ರಾಮನಗರ ಜಿಲ್ಲೆ ಇವರಿಗೆ ಕರ್ನಾಟಕ ನಾಗರೀಕಾ ಸೇವಾ (ವರ್ಗೀಕರಣ ನಿರ್ಬಂಧಿತ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 8(iii) ರಂತೆ ಮುಂದಿನ ಒಂದು

ವಾರ್ಷಿಕ ವೇತನ ಬಡ್ತಿಯನ್ನು ಸಂಚಿತರಹಿತವಾಗಿ ತಡೆಹಿಡಿದು ಆದೇಶಿಸಿದೆ ಮತ್ತು ಅಮಾನತ್ತು ಅವಧಿಯನ್ನು ಅಮಾನತ್ತು ಅವಧಿ ಎಂದೇ ಪರಿಗಣಿಸಿ ಆದೇಶಿಸಿರುವುದನ್ನು ಅಂಗೀಕರಿಸಿ, ಮೇಲ್ಮನವಿದಾರರ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಬಹುದಾಗಿದೆ. ಅದರಂತೆ, ಈ ಕೆಳಕಂಡಂತೆ ಆದೇಶಿಸಿದೆ.

**ಆದೇಶ**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಮೇಲ್ಮನವಿದಾರರಾದ ಕುಮಾರಿ ಶೋಭಾ ಎಂ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಜೆ.ಬ್ಯಾಡರಹಳ್ಳಿ ಗ್ರಾಮ ಪಂಚಾಯಿತಿ, ಹಾಲಿ ಬಿ.ವಿ ಹಳ್ಳಿ ಗ್ರಾಮ ಪಂಚಾಯಿತಿ, ಚನ್ನಪಟ್ಟಣ ತಾಲ್ಲೂಕು, ರಾಮನಗರ ಜಿಲ್ಲೆ ರವರು ಜೆ.ಬ್ಯಾಡರಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಅವಧಿಯಲ್ಲಿ ಎಸಗಿರುವ ಆರೋಪಗಳು ಸಾಬೀತಾಗಿರುವ ಹಿನ್ನೆಲೆಯಲ್ಲಿ ಸದರಿಯವರ ಮೇಲ್ಮನವಿಯನ್ನು ತಿರಸ್ಕರಿಸಿ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಮನಗರ ಜಿಲ್ಲೆ ರವರು ಈಗಾಗಲೇ ವಿಧಿಸಿರುವ ದಂಡನಾದೇಶವನ್ನು (**ಒಂದು ವಾರ್ಷಿಕ ವೇತನ ಬಡ್ತಿಯನ್ನು ಸಂಚಿತರಹಿತವಾಗಿ ತಡೆಹಿಡಿದು ಆದೇಶಿಸಿದೆ ಮತ್ತು ಅಮಾನತ್ತು ಅವಧಿಯನ್ನು ಅಮಾನತ್ತು ಅವಧಿ ಎಂದೇ ಪರಿಗಣಿಸಿರುವ ಆದೇಶ**) ಅಂಗೀಕರಿಸಿ, ಮೇಲ್ಮನವಿದಾರರ ಅರ್ಜಿಯನ್ನು ತಿರಸ್ಕರಿಸಿ ಆದೇಶಿಸಿದೆ.

ಈ ಆದೇಶವನ್ನು ದಿನಾಂಕ:26.04.2022 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಿರುತ್ತೇನೆ.

(ಉಮಾ ಮಹಾದೇವನ್)
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:-

1. ಮಹಾಲೇಖಪಾಲರು, ಬೆಂಗಳೂರು.
2. ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯ, ಕೆ.ಜಿ ರಸ್ತೆ, ಕಾಳಿದಾಸ ಮಾರ್ಗ, ಬೆಂಗಳೂರು – 09.
3. ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯಿತಿ, ರಾಮನಗರ ಜಿಲ್ಲೆ.
4. ಕಾರ್ಯನಿರ್ವಾಹಕ ಅಧಿಕಾರಿ, ತೀರ್ಥಹಳ್ಳಿ/ಸಾಗರ ತಾಲ್ಲೂಕು ಪಂಚಾಯಿತಿ, ರಾಮನಗರ ಜಿಲ್ಲೆ.
5. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಜೆ.ಬ್ಯಾಡರಹಳ್ಳಿ ಗ್ರಾಮ ಪಂಚಾಯಿತಿ ಚನ್ನಪಟ್ಟಣ ತಾಲ್ಲೂಕು, ರಾಮನಗರ ಜಿಲ್ಲೆ.
6. ಕುಮಾರಿ ಶೋಭಾ ಎಂ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಜೆ.ಬ್ಯಾಡರಹಳ್ಳಿ ಗ್ರಾಮ ಪಂಚಾಯಿತಿ, ಹಾಲಿ ಬಿ.ವಿ ಹಳ್ಳಿ ಗ್ರಾಮ ಪಂಚಾಯಿತಿ, ಚನ್ನಪಟ್ಟಣ ತಾಲ್ಲೂಕು, ರಾಮನಗರ ಜಿಲ್ಲೆ – ***ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಜೆ.ಬ್ಯಾಡರಹಳ್ಳಿ ಗ್ರಾಮ ಪಂಚಾಯಿತಿ ಚನ್ನಪಟ್ಟಣ ತಾಲ್ಲೂಕು, ರಾಮನಗರ ಜಿಲ್ಲೆ ಇವರ ಮುಖಾಂತರ.***
7. ಗಣಕ ಕೋಶ–ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8. ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.

ಪ್ರತಿಯನ್ನು ಮಾಹಿತಿಗಾಗಿ:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ನಿರ್ದೇಶಕರು (ಪಂ.ರಾಜ್–1) ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಸಹಾಯಕರು.

*****